ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 27–9–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳಿ ನಿಯಮಿತ ವತಿಯಿಂದ "ವಿಶ್ವ ಹೃದಯ ದಿನಾಚರಣೆ - 2014" ಹಾಗೂ ರಾಷ್ಟ್ರದ ಪ್ರಖ್ಯಾತ ಹೃದಯ ತಜ್ಞರಿಗೆ ಸನ್ಮಾನ ಮತ್ತು ಉಪನ್ಯಾಸ.<br><br>ಉದ್ಘಾಟನೆ:<br><br>ಶ್ರೀ ಟಿ.ಬಿ. ಜಯಚಂದ್ರ,<br>ಪಶುಸಂಗೋಪನಾ, ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಮಾನವ ಹಕ್ಕುಗಳ ಸಚಿವರು.<br><br>ಅಧ್ಯಕ್ಷತೆ:<br><br>ಶ್ರೀ ಪಿ. ನಾಗರಾಜು,<br>ಅಧ್ಯಕ್ಷರು,<br>ಕರ್ನಾಟಕ ಹಾಲು ಮಹಾಮಂಡಳಿ. | 29–09–2014<br>ಸೋಮವಾರ<br>ಬೆಳಿಗ್ಗೆ<br>11–00 ಗಂಟೆಗೆ | ಹೋಟೆಲ್ ಲೀ. ಮೆರಿಡಿಯನ್,<br>ನಂ 28, ಸ್ಯಾಂಕಿ ರಸ್ತೆ,<br>ಬೆಂಗಳೂರು |
| 2 | ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಡಾ: ಯು.ಆರ್. ಅನಂತಮೂರ್ತಿ : ಒಂದು ಸ್ಮರಣೆ ನಾಡಿನ ಶ್ರೇಷ್ಠ ಸಾಹಿತಿಗಳು ಹಾಗೂ ಚಿಂತಕರು<br><br>ಮುಖ್ಯ ಅತಿಥಿಗಳು:<br>ಪ್ರೊ. ಎಸ್.ಜಿ. ಸಿದ್ಧರಾಮಯ್ಯ,<br>ಖ್ಯಾತ ಕವಿಗಳು, ಚಿಂತಕರು, ಬೆಂಗಳೂರು<br>ಶ್ರೀ ಶೂದ್ರ ಶ್ರೀನಿವಾಸ್,<br>ಖ್ಯಾತ ಸಾಹಿತಿಗಳು, ಚಿಂತಕರು<br>ಅಧ್ಯಕ್ಷತೆ: | 29–09–2014<br>ಸೋಮವಾರ<br>ಸಂಜೆ<br>4–00 ಗಂಟೆಗೆ | "ಗ್ರಂಥಾಂಗಣ"<br>ನಗರ ಕೇಂದ್ರ ಗ್ರಂಥಾಲಯ,<br>ಪಶ್ಚಿಮ ವಲಯ,<br>ಹಂಪಿ ನಗರ<br>ಬೆಂಗಳೂರು |

| | | | |
|---|---|---|---|
| | **ಡಾ: ಸತೀಶ್‌ಕುಮಾರ್ ಎಸ್. ಹೊಸಮನಿ,**<br>**ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ** | | |

**ನಿರ್ದೇಶಕರ ಪರವಾಗಿ**

# ಪತ್ರಿಕಾ ಪ್ರಕಟಣೆ

## ಸಂಗೊಳ್ಳಿ ರಾಯಣ್ಣ ಪ್ರಶಸ್ತಿ ಪ್ರಕಟ

**ಬೆಂಗಳೂರು, ಸೆಪ್ಟೆಂಬರ್ 27, (ಕರ್ನಾಟಕ ವಾರ್ತೆ)**

2013 ನೇ ಸಾಲಿನ ಸಂಗೊಳ್ಳಿ ರಾಯಣ್ಣ ಪ್ರಶಸ್ತಿಯು ಕನ್ನಡ ನಾಡಿನ ನೆಲ, ಜಲ, ಭಾಷೆ, ಸಂಸ್ಕೃತಿಯ ಬಗ್ಗೆ ಹೋರಾಡಿದ ಶ್ರೀ ವಾಟಾಳ್ ನಾಗರಾಜ್, ಇವರಿಗೆ ಲಭಿಸಿದೆ.

ಪ್ರೊ. ಚಂದ್ರಶೇಖರ ಪಾಟೀಲ, ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಆಯ್ಕೆ ಸಮಿತಿಯು ಶ್ರೀಯುತರ ಹೆಸರನ್ನು ಪ್ರಶತ್ತಿಗೆ ಆಯ್ಕೆ ಮಾಡಿರುವ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ವಾಟಾಳ್ ನಾಗರಾಜ್ ಅವರಿಗೆ ಸಂಗೊಳ್ಳಿ ರಾಯಣ್ಣ ಪ್ರಶಸ್ತಿ ನೀಡುವ ಸಂಬಂಧ ಸರ್ಕಾರಿ ಆದೇಶ ಹೊರಡಿಸಿದೆ.

ಬಿಜಿಪಿ:ಜಿಪಿಆರ್.

## ಪ್ರೊ. ಕೆ.ಜಿ. ಕುಂದಣಗಾರ ಗಡಿನಾಡ ಸಾಹಿತ್ಯ ಪ್ರಶಸ್ತಿ ಪ್ರಕಟ

**ಬೆಂಗಳೂರು, ಸೆಪ್ಟೆಂಬರ್ 27, (ಕರ್ನಾಟಕ ವಾರ್ತೆ)**

2013 ನೇ ಸಾಲಿನ ಪ್ರೊ. ಕೆ.ಜಿ. ಕುಂದಣಗಾರ ಗಡಿನಾಡ ಸಾಹಿತ್ಯ ಪ್ರಶಸ್ತಿಯನ್ನು ಸಂಶೋಧನೆ, ವಿಮರ್ಶೆ, ಸಂಪಾದನೆ ಮುಂತಾದ ಕ್ಷೇತ್ರಗಳಲ್ಲಿನ ಸಾಧನೆಗಾಗಿ ಗುಲ್ಬರ್ಗಾದ ಡಾ. ಎಂ.ಜಿ. ಬಿರಾದಾರ, ಇವರಿಗೆ ಲಭಿಸಿದೆ.

ಡಾ ಚೆನ್ನಣ್ಣ ವಾಲಿಕಾರ, ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಆಯ್ಕೆ ಸಮಿತಿಯು ಶ್ರೀಯುತರ ಹೆಸರನ್ನು ಪ್ರಶಸ್ತಿಗೆ ಆಯ್ಕೆ ಮಾಡಿರುವ ಹಿನ್ನೆಲೆಯಲ್ಲಿ ಸರ್ಕಾರವು ಡಾ.ಎಂ.ಜಿ. ಬಿರಾದಾರ ಅವರಿಗೆ ಪ್ರೊ. ಕೆ.ಜಿ. ಕುಂದಣಗಾರ ಗಡಿನಾಡ ಸಾಹಿತ್ಯ ಪ್ರಶಸ್ತಿ ನೀಡುವ ಸಂಬಂಧ ಸರ್ಕಾರಿ ಆದೇಶ ಹೊರಡಿಸಿದೆ.

ಬಿಜಿಪಿ.ಜಿಪಿಆರ್.

## ಜಕಣಾಚಾರಿ ಪ್ರಶಸ್ತಿ ಪ್ರಕಟ

**ಬೆಂಗಳೂರು, ಸೆಪ್ಟೆಂಬರ್ 27, (ಕರ್ನಾಟಕ ವಾರ್ತೆ)**

2013 ನೇ ಸಾಲಿನ ಜಕಣಾಚಾರಿ ಪ್ರಶಸ್ತಿಯನ್ನು ಶಿಲ್ಪಕಲಾ ಕ್ಷೇತ್ರದಲ್ಲಿನ ಸಾಧನೆ, ಕಲಾಕೃತಿ ಪ್ರದರ್ಶನ ಕುರಿತ ಸಾಧನೆಗೆ ಯಾದಗಿರಿಯ ಶ್ರೀ ಬಸಣ್ಣ ಮೋನಪ್ಪ ಬಡಿಗೇರ, (ಕಾಷ್ಟಶಿಲ್ಪಿ) ಇವರಿಗೆ ಲಭಿಸಿದೆ.

ಶ್ರೀಮತಿ ಕನಕಾಮೂರ್ತಿ, ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಆಯ್ಕೆ ಸಮಿತಿಯು ಶ್ರೀಯುತರ ಹೆಸರನ್ನು ಪ್ರಶಸ್ತಿಗೆ ಆಯ್ಕೆ ಮಾಡಿರುವ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಬಸಣ್ಣ ಮೋನಪ್ಪ ಬಡಿಗೇರ ಅವರಿಗೆ **ಜಕಣಾಚಾರಿ** ಪ್ರಶಸ್ತಿ ನೀಡುವ ಸಂಬಂಧ ಸರ್ಕಾರಿ ಆದೇಶ ಹೊರಡಿಸಿದೆ.

ಬಿಜಿಪಿ.ಜಿಪಿಆರ್.

## ದಾನಚಿಂತಾಮಣಿ ಅತ್ತಿಮಬ್ಬೆ ಪ್ರಶಸ್ತಿ ಪ್ರಕಟ

**ಬೆಂಗಳೂರು, ಸೆಪ್ಟೆಂಬರ್ 27, (ಕರ್ನಾಟಕ ವಾರ್ತೆ)**

2013 ನೇ ಸಾಲಿನ ದಾನಚಿಂತಾಮಣಿ ಅತ್ತಿಮಬ್ಬೆ ಪ್ರಶಸ್ತಿಯನ್ನು ನಾಡಿನ ಸಾಹಿತ್ಯ ಹಾಗೂ ಸಾಂಸ್ಕೃತಿಕ ಕ್ಷೇತ್ರದಲ್ಲಿ ಗಣನೀಯ ಕೊಡುಗೆ ನೀಡಿರುವ ಮಂಡ್ಯದ ಶ್ರೀಮತಿ ಎಂ. ಸರಸ್ವತಿಗೌಡ, ಇವರಿಗೆ ಲಭಿಸಿದೆ.

ಡಾ: ಕೆ.ಆರ್. ಸಂಧ್ಯಾರೆಡ್ಡಿ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಆಯ್ಕೆ ಸಮಿತಿಯು ಶ್ರೀಯುತರ ಹೆಸರನ್ನು ಪ್ರಶಸ್ತಿಗೆ ಆಯ್ಕೆ ಮಾಡಿರುವ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀಮತಿ ಎಂ. ಸರಸ್ವತಿಗೌಡ ಅವರಿಗೆ **ದಾನಚಿಂತಾಮಣಿ ಅತ್ತಿಮಬ್ಬೆ** ಪ್ರಶಸ್ತಿ ನೀಡುವ ಸಂಬಂಧ ಸರ್ಕಾರಿ ಆದೇಶ ಹೊರಡಿಸಿದೆ

ಬಿಜಿಪಿ.ಜಿಪಿಆರ್.

## ಬಸವ ಪುರಸ್ಕಾರ ರಾಷ್ಟ್ರೀಯ ಪ್ರಶಸ್ತಿ ಆಯ್ಕೆ ಸಮಿತಿ ಅಧ್ಯಕ್ಷರಾಗಿ

## ಡಾ. ಪ್ರೊ. ಜಿ.ಎಸ್. ಸಿದ್ದಲಿಂಗಯ್ಯ ನೇಮಕ

**ಬೆಂಗಳೂರು, ಸೆಪ್ಟೆಂಬರ್ 27, (ಕರ್ನಾಟಕ ವಾರ್ತೆ)**

2013 ನೇ ಸಾಲಿನ ಬಸವ ಪುರಸ್ಕಾರ ರಾಷ್ಟ್ರೀಯ ಪ್ರಶಸ್ತಿಯನ್ನು ಆಯ್ಕೆ ಮಾಡಲು ರಚಿಸಲಾಗಿರುವ ಸಲಹಾ ಸಮಿತಿಯ ಅಧ್ಯಕ್ಷರನ್ನಾಗಿ ಡಾ. ಪ್ರೊ. ಜಿ.ಎಸ್. ಸಿದ್ಧಲಿಂಗಯ್ಯ ಅವರನ್ನು ನೇಮಿಸಲಾಗಿದೆ.

2013 ನೇ ಸಾಲಿನ ಬಸವ ಪುರಸ್ಕಾರ ರಾಷ್ಟ್ರೀಯ ಪ್ರಶಸ್ತಿಯನ್ನು ಆಯ್ಕೆ ಮಾಡಲು ಡಾ. ಚಂದ್ರಶೇಖರ ಕಂಬಾರ, ಅವರನ್ನು ಅಧ್ಯಕ್ಷರನ್ನಾಗಿ ನೇಮಿಸಲಾಗಿತ್ತು. ಆದರೆ ಅವರು ಸಮಿತಿಯ ಅಧ್ಯಕ್ಷರಾಗಿ ಮುಂದುವರೆಯಲು ಸಾಧ್ಯವಿಲ್ಲವೆಂದು ತಿಳಿಸಿರುವ ಹಿನ್ನೆಲೆಯಲ್ಲಿ ಅವರ ಹೆಸರನ್ನು ರದ್ದು ಮಾಡಿ ಬೇರೆಯವರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರು ಸರ್ಕಾರವನ್ನು ಕೋರಿದ್ದ ಹಿನ್ನೆಲೆಯಲ್ಲಿ ಡಾ. ಪ್ರೊ. ಜಿ.ಎಸ್. ಸಿದ್ಧಲಿಂಗಯ್ಯ ಅವರನ್ನು ಈ ಸ್ಥಾನಕ್ಕೆ ನೇಮಿಸಿ ಸರ್ಕಾರ ಆದೇಶ ಹೊರಡಿಸಿದೆ.

ಬಿಜಿಪಿ.ಜಿಪಿಆರ್.

## ಯಾದಗಿರಿಯಲ್ಲಿ ಅಂತರಾಷ್ಟ್ರೀಯ ಗುಣಮಟ್ಟದ ಜವಳಿ ಪಾರ್ಕ್ ನಿರ್ಮಾಣ

**ಬೆಂಗಳೂರು, ಸೆಪ್ಟೆಂಬರ್ 27, (ಕರ್ನಾಟಕ ವಾರ್ತೆ)**

ಯಾದಗಿರಿ ಜಿಲ್ಲೆಯಲ್ಲಿ ಅಂತರರಾಷ್ಟ್ರೀಯ ಗುಣಮಟ್ಟವುಳ್ಳ ಜವಳಿ ಪಾರ್ಕ್‌ನ್ನು ಪ್ರಾರಂಭಿಸಲಾಗುವುದು ಎಂದು ಜವಳಿ ಖಾತೆಯ ಸಚಿವರಾದ ಶ್ರೀ ಬಾಬೂರಾವ್ ಚಿಂಚನಸೂರ್ ಅವರು ತಿಳಿಸಿದರು.

ವಿಕಾಸೌಧದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಚಿವರು ಜವಳಿ ಪಾರ್ಕ್ ನಿರ್ಮಿಸುವ ಸಂಬಂಧ ಈಗಾಗಲೇ ಒಂದು ಸಾವಿರ ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದರು.

ರಾಜ್ಯದ ಮುಖ್ಯಮಂತ್ರಿ ಅವರು ಜವಳಿ ಕ್ಷೇತ್ರದ ಅಭಿವೃದ್ಧಿಗೆ ವಿಶೇಷ ಆಸಕ್ತಿ ಹೊಂದಿದ್ದಾರೆ ಎಂದ ಸಚಿವರು ಕಳೆದ ಆಗಸ್ಟ್ ಮಾಹೆಯಲ್ಲಿ ಜವಳಿ ಕ್ಷೇತ್ರಕ್ಕೆ ಬಂಡವಾಳ ಹೂಡುವುದಕ್ಕಾಗಿ ನಗರದಲ್ಲಿ ಬಂಡವಾಳ ಹೂಡಿಕೆ ಸಮಾವೇಶ ನಡೆಸಲಾಗಿದೆ. ಇದರಿಂದ ರಾಜ್ಯಕ್ಕೆ ಸುಮಾರು ಹತ್ತು ಸಾವಿರ ಕೋಟಿ ಬಂಡವಾಳ ಬರುವ ನಿರೀಕ್ಷೆಯಿದ್ದು 10 ಲಕ್ಷ ಮಂದಿಗೆ ಉದ್ಯೋಗ ಸಿಗುವ ಭರವಸೆ ಇದೆ ಎಂದರು.

ರಾಜ್ಯದಲ್ಲಿರುವ ನೇಕಾರರ ಅಭಿವೃದ್ಧಿಗಾಗಿ 2013–18 ನೇ ಸಾಲಿಗೆ ಅನ್ವಯವಾಗುವಂತೆ ಹೊಸ ಜವಳಿ ನೀತಿಯನ್ನು ಜಾರಿಗೆ ತರಲಾಗಿದೆ. ಅಲ್ಲದೆ, ಬಳ್ಳಾರಿ, ಬಿಜಾಪುರ, ಬಾಗಲಕೋಟೆ, ಚಾಮರಾಜನಗರ, ಚೆನ್ನಪಟ್ಟಣ, ದಾವಣಗೆರೆ, ಮೈಸೂರು ಹಾಗೂ ಗುಲಬರ್ಗಾ ಜಿಲ್ಲೆಗಳಲ್ಲಿ ಅಲ್ಲಿನ ವೈಶಿಷ್ಟ್ಯಕ್ಕನುಗುಣವಾಗಿ ಜವಳಿ ಪಾರ್ಕ್‌ಗಳನ್ನು ನಿರ್ಮಿಸಲಾಗುವುದು ಎಂದರು.

ರಾಜ್ಯದ ನೇಕಾರರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಮತ್ತು ಅವರ ಆರ್ಥಿಕ ಮಟ್ಟ ಸುಧಾರಿಸುವ ಸಂಬಂಧ ಕೇಂದ್ರ ಸರ್ಕಾರದ ಜವಳಿ ಸಚಿವರನ್ನು ಭೇಟಿಮಾಡಿ ಚರ್ಚಿಸಲಾಗಿದೆ ಎಂದರು ಹಾಗೂ ನೇಕಾರರಿಗೆ ಹೆಚ್ಚಿನ ಕೂಲಿ, ಆರೋಗ್ಯ ವಿಮೆ, ಇತರೆ ಸೌಲಭ್ಯಗಳನ್ನು ನೀಡಲು 10000 ಕೋಟಿ ರೂ. ವಿಶೇಷ ಅನುದಾನ ಬಿಡುಗಡೆಗಾಗಿ ಮನವಿ ಮಾಡಲಾಗಿದೆ ಎಂದು ಸಚಿವರು ಈ ಸಂದರ್ಭದಲ್ಲಿ ತಿಳಿಸಿದರು.

ಬಿಜಿಪಿ:ಜಿಪಿಆರ್.

## ಅವಧಿ ವಿಸ್ತರಣೆ

ಬೆಂಗಳೂರು, ಸೆಪ್ಟೆಂಬರ್ 27, (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗ ದಿನಾಂಕ 25-8-2014 ರ ಅಧಿಸೂಚನೆಯಲ್ಲಿ ಜಲ ಸಂಪನ್ಮೂಲ ಇಲಾಖೆಯ 550 ಸಹಾಯಕ / ಕಿರಿಯ ಇಂಜಿನಿಯರ್‌ಗಳ ವಿಶೇಷ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ದಿನಾಂಕ 25-9-2014 ರಂದು ಕೊನೆಯ ದಿನಾಂಕವನ್ನು ನಿಗದಿಪಡಿಸಲಾಗಿತ್ತು. ಇದರಂತೆ ದಿನಾಂಕ 25-9-2014 ರಂದು ಮಧ್ಯಾಹ್ನ 1.00 ಗಂಟೆಗೆ ಅರ್ಜಿ ಸಲ್ಲಿಸುವ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿತ್ತು. ನ್ಯಾಯಾಲಯದ ಆದೇಶದಂತೆ ಮೀಸಲಾತಿ ಪ್ರಮಾಣ ಪತ್ರದ ದಿನಾಂಕವನ್ನು ನಮೂದಿಸದೇ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 30 ರ ಮಧ್ಯಾಹ್ನ 1-00 ಗಂಟೆಯವರೆಗೆ ಹಾಗೂ ಶುಲ್ಕ ಪಾವತಿಸಲು ಇದೇ ದಿನದ ಅಂಚೆ ಕಛೇರಿಯ ಕಾರ್ಯದ ವೇಳೆಯೊಳಗೆ ಅವಕಾಶ ಕಲ್ಪಿಸಿದೆ. ಸದರಿ ಪ್ರಕರಣದಲ್ಲಿನ ಪಿಟೀಷನರ್ಸ್ ಹಾಗೂ ಇವರಂತಹ ಇತರೆ ಅಭ್ಯರ್ಥಿಗಳು ಈ ದಿನಾಂಕದೊಳಗೆ ಅರ್ಜಿಸಲ್ಲಿಸಬಹುದಾಗಿದೆ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.

## ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 27, (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನ ಸಭೆಯ ಸರ್ಕಾರಿ ಮುಖ್ಯ ಸಚೇತಕ ಶ್ರೀ ಅಶೋಕ ಮಹಾದೇವಪ್ಪ ಪಟ್ಟಣ್ (ಶ್ರೀ ಪಿ.ಎಂ. ಅಶೋಕ್) ಅವರು ಸೆಪ್ಟೆಂಬರ್ 28 ರಿಂದ ಅಕ್ಟೋಬರ್ 5 ರವರೆಗೆ ಬೆಳಗಾವಿ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಅಕ್ಟೋಬರ್ 6 ರಂದು ಕೇಂದ್ರ ಸ್ಥಾನಕ್ಕೆ ಹಿಂತಿರುಗುವರು.

**ಛಾಯಾಚಿತ್ರ ಶೀರ್ಷಿಕೆ:**

ಚಿತ್ರಕಲಾ ಪರಿಷತ್‌ನಲ್ಲಿ ಇಂದು ಸೆಪ್ಟೆಂಬರ್ 27 ರಂದು "ಕಲ್ಲರಳಿ ಕಲೆಯಾಗಿ" ಛಾಯಾಚಿತ್ರ ಪ್ರದರ್ಶನವನ್ನು ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವ ಶ್ರೀ ಆರ್.ವಿ. ದೇಶಪಾಂಡೆ ಅವರು ಉದ್ಘಾಟಿಸಿದರು. ಕರ್ನಾಟಕ ಚಿತ್ರಕಲಾ ಪರಿಷತ್ತಿನ ಅಧ್ಯಕ್ಷ ಶ್ರೀ ಬಿ.ಎಲ್. ಶಂಕರ್, ಛಾಯಾಗ್ರಾಹಕ ಶ್ರೀ ಟಿ. ಕೆಂಪಣ್ಣ ಚಿತ್ರದಲ್ಲಿದ್ದಾರೆ.